# ಕರ್ನಾಟಕ ವಿಧಾನ ಪರಿಷತ್ತು

1. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1028
2. ಮಾನ್ಯ ವಿಧಾನ ಪರಿಷತ್ ಸದಸ್ಯರ ಹೆಸರು : ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ. (ವಿಧಾನ ಸಭೆಯಿಂದ ಚುನಾಯಿತರಾದವರು)
3. ಉತ್ತರಿಸುವ ದಿನಾಂಕ : 25.07.2024
4. ಉತ್ತರಿಸುವ ಸಚಿವರು : ಗೃಹ ಸಚಿವರು

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಡ್ರಗ್ಸ್ ಮಾರಾಟ ದಂಧೆ ಅವ್ಯಾಹತವಾಗಿ ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ರಾಜ್ಯದಲ್ಲಿ ಡ್ರಗ್ಸ್ ಮಾರಾಟ ದಂಧೆ ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ. |
| ಆ) | ಬಂದಿದ್ದಲ್ಲಿ, ಡ್ರಗ್ಸ್ ಮಾರಾಟ ದಂಧೆಯನ್ನು ತಡೆಯಲು ಸರ್ಕಾರ ಕೈಗೊಂಡಿರುವ ಪರಿಣಾಮಕಾರಿ ಕ್ರಮಗಳೇನು; | **ರಾಜ್ಯದಲ್ಲಿ ಮಾದಕ ವಸ್ತುಗಳ ಮಾರಾಟ, ಸಾಗಣೆ ಮತ್ತು ಸೇವನೆಯನ್ನು ತಡೆಗಟ್ಟಲು ಹಾಗೂ ನಿಯಂತ್ರಿಸಲು ತೆಗೆದುಕೊಂಡಿರುವ ಕ್ರಮಗಳು ಈ ಕೆಳಕಂಡಂತಿದೆ:-**<br><br>➢ ಸಿಐಡಿ ಘಟಕದ ಮಾದಕ ದ್ರವ್ಯ ಮತ್ತು ಸಂಘಟಿತ ಅಪರಾಧಗಳ ವಿಭಾಗ (ಎನ್.ಓ.ಸಿ)ವನ್ನು ಬಲಪಡಿಸುವ ಸಲುವಾಗಿ ಒಂದು ಎ.ಡಿ.ಜಿ.ಪಿ. ಹುದ್ದೆ ಮತ್ತು ಒಂದು ಡಿ.ಐ.ಜಿ.ಪಿ. ಹುದ್ದೆಯನ್ನು ಸೃಜಿಸಲಾಗಿದ್ದು, ಇವರ ಮೇಲ್ವಿಚಾರಣೆಯಲ್ಲಿ ಮಾದಕದ್ರವ್ಯ ಮತ್ತು ಸಂಘಟಿತ ಅಪರಾಧಗಳ ವಿಭಾಗ (ಎನ್.ಓ.ಸಿ) ಕಾರ್ಯ ನಿರ್ವಹಿಸುತ್ತಿದೆ.<br><br>➢ ಅಕ್ರಮವಾಗಿ ಬೆಳಸಲಾಗುವ ಮಾದಕ ಬೆಳೆಗಳನ್ನು ಗುರುತಿಸಿ ನಾಶಪಡಿಸುವ ಸಲುವಾಗಿ ಎನ್.ಸಿ.ಬಿ, ನವದೆಹಲಿಯವರು ಅಭಿವೃದ್ಧಿ ಪಡಿಸಿರುವ MAPDRUGS (NCB Mobile Application/Web Portal) ನ್ನು ಉಪಯೋಗಿಸುವ ಕುರಿತು ರಾಜ್ಯದ ಎಲ್ಲಾ ಪೊಲೀಸ್ ಠಾಣೆಗಳ ಕಾರ್ಯಾಕಾರಿ ಸಿಬ್ಬಂದಿಗಳಿಗೆ ಆನ್‌ಲೈನ್ ತರಬೇತಿಯನ್ನು ನೀಡಲಾಗಿರುತ್ತದೆ.<br><br>➢ ರಾಜ್ಯದ ಡಿ.ವೈ.ಎಸ್.ಪಿ ಗಳು, ಪೊಲೀಸ್ ಠಾಣೆಗಳ ಪೊಲೀಸ್ ನಿರೀಕ್ಷಕರು ಹಾಗೂ ಸಿಬ್ಬಂದಿಗಳಿಗೆ ಮಾದಕ ವಸ್ತು ವಿಷಯಕ್ಕೆ ಸಂಬಂಧಿಸಿದ ಪ್ರಕರಣಗಳ ತನಿಖೆಯಲ್ಲಿ ಕಾರ್ಯಕ್ಷಮತೆ(Capacity Building) ಹೆಚ್ಚಿಸುವ ಸಲುವಾಗಿ ಎನ್.ಸಿ.ಬಿ ಹಾಗೂ ಇತರೆ ಸಂಸ್ಥೆಯವರ ಸಹಯೋಗದೊಂದಿಗೆ ಈಗಾಗಲೇ 06 ಕಾರ್ಯಾಗಾರಗಳನ್ನು ಆಯೋಜಿಸಲಾಗಿದೆ. ಈ ಕಾರ್ಯಾಗಾರಗಳಲ್ಲಿ ಪೊಲೀಸ್ ಅಧಿಕಾರಿ/ಸಿಬ್ಬಂದಿಗಳು ಹಾಗೂ ಅಬಕಾರಿ ಇಲಾಖೆಯ ಅಧಿಕಾರಿಗಳಿಗೆ ತರಬೇತಿ ನೀಡಲಾಗುತ್ತಿದೆ. ಮುಂದೆಯೂ ಸಹ ಹೆಚ್ಚಿನ ಕಾರ್ಯಾಗಾರಗಳನ್ನು ಹಮ್ಮಿಕೊಳ್ಳಲಾಗುವುದು. |

- ಠಾಣಾ ತನಿಖಾ ಸಹಾಯಕರಿಗೆ ಮಾದಕ ವಸ್ತುವಿನ ವಿಷಯದ ಕುರಿತು ತರಬೇತಿ ನೀಡಲು ಟ್ರೈನಿಂಗ್ ಆಫ್ ಟ್ರೈನರ್ಸ್ (TOT) ತರಬೇತಿಗೆ ಸಿಐಡಿ ಅಧಿಕಾರಿಗಳನ್ನು ಸಿಎಪಿಟಿ, ಭೂಪಾಲ್ ಇಲ್ಲಿಗೆ ನಿಯೋಜಿಸಿ ತರಬೇತಿ ನೀಡಲಾಗಿರುತ್ತದೆ. ಅಂತೆಯೇ ಪೊಲೀಸ್ ತರಬೇತಿ ಶಾಲೆಗಳಲ್ಲೂ ಪೊಲೀಸ್ ಸಿಬ್ಬಂದಿಗಳಿಗೆ ಎನ್.ಡಿ.ಪಿ.ಎಸ್ ಕಾಯ್ದೆ–1985ರ ಕುರಿತಾಗಿ ಬೋಧನೆ ನೀಡಲಾಗುತ್ತಿದೆ.
- ಬೆಂಗಳೂರು ನಗರ ಪೊಲೀಸರು ಮೇಲಿಂದ ಮೇಲೆ ವಿದೇಶಿಯರ ನೆಲೆಗಳ ಮೇಲೆ ದಾಳಿಗಳನ್ನು ಕೈಗೊಂಡು ಅಕ್ರಮ ಚಟುವಟಿಕೆಗಳಲ್ಲಿ ಭಾಗಿಯಾಗಿದ್ದ ವಿದೇಶಿಯರ ಮೇಲೆ ಪ್ರಕರಣ ದಾಖಲು ಮಾಡುವುದಲ್ಲದೆ, ವೀಸಾ ಮತ್ತು ಪಾಸ್‌ಪೋರ್ಟ್ ಅವಧಿ ಮುಗಿದ ವಿದೇಶಿಯರನ್ನು ಡಿಟೆನ್ಷನ್ ಸೆಂಟರ್‌ಗಳಲ್ಲಿ ಸೇರಿಸಲಾಗುತ್ತಿದೆ ಹಾಗೂ ಎಫ್.ಆರ್.ಆರ್.ಓ ರವರ ಮೂಲಕ ಸದರಿಯವರ ದೇಶಕ್ಕೆ ವಾಪಸ್ಸು ಕಳುಹಿಸಲು ಕ್ರಮ ಕೈಗೊಳ್ಳಲಾಗಿದೆ.
- ಸಾರ್ವಜನಿಕರಿಂದ ಮಾದಕ ವಸ್ತುಗಳ ಬಗ್ಗೆ ರಹಸ್ಯ ಮಾಹಿತಿಗಳನ್ನು ಸಂಗ್ರಹಿಸಲು ಟೋಲ್ ಫ್ರೀ ಸಂಖ್ಯೆ: 1908 ದೂರವಾಣಿಯ ಮುಖಾಂತರ ಸಂಪರ್ಕಿಸಿ ಮಾಹಿತಿ ನೀಡುವ ಯೋಜನೆ ಪ್ರಾರಂಭಿಸಲಾಗಿದೆ.
- ಒಂದು ಬಾರಿಗಿಂತ ಹೆಚ್ಚು ಬಾರಿ ಎನ್.ಡಿ.ಪಿ.ಎಸ್ ಕಾಯ್ದೆ–1985ರಡಿ ಪ್ರಕರಣಗಳಲ್ಲಿ ಭಾಗಿಯಾದ ಆರೋಪಿಗಳ ವಿರುದ್ಧ PIT-NDPS (The Prevention of Illicit Traffic in Narcotic Drugs and Psychotropic Substances Act)1988 ರಡಿಯಲ್ಲಿ ಬಂಧನದ ಆದೇಶ ಮಾಡಲಾಗಿದೆ.

ಇ) ಅಕ್ರಮವಾಗಿ ನೆಲೆಸಿರುವುದರ ಜೊತೆಗೆ ಡ್ರಗ್ಸ್ ಮಾರಾಟ ದಂಧೆಯಲ್ಲಿ ಭಾಗಿಯಾಗಿರುವ ವಿದೇಶಿಯರ ವಿರುದ್ಧ ಕಳೆದ 3 ವರ್ಷಗಳಲ್ಲಿ ಎಷ್ಟು ಪ್ರಕರಣಗಳು ದಾಖಲಾಗಿವೆ ಹಾಗೂ ಸದರಿ ಪ್ರಕರಣಗಳಲ್ಲಿ ಸರ್ಕಾರ ಕೈಗೊಂಡಿರುವ ಕ್ರಮಗಳೇನು;

ಅಕ್ರಮವಾಗಿ ನೆಲೆಸಿರುವ ವಿದೇಶಿ ಪ್ರಜೆಗಳು ಮಾದಕ ವಸ್ತು ಮಾರಾಟ ದಂಧೆಯಲ್ಲಿ ತೊಡಗಿರುವವರ ವಿರುದ್ಧ ಕಳೆದ 3 ವರ್ಷಗಳಲ್ಲಿ ದಾಖಲಿಸಿರುವ ಪ್ರಕರಣಗಳ ಅಂಕಿ ಅಂಶಗಳು ಈ ಕೆಳಕಂಡಂತಿದೆ:–

| **ವರ್ಷಾವಾರು** | **ವಿದೇಶಿಯರ ವಿರುದ್ಧ ದಾಖಲಿಸಿರುವ ಮಾದಕ ವಸ್ತು ಪ್ರಕರಣಗಳ ಸಂಖ್ಯೆ** | **ಬಂಧಿಸಿದ ವಿದೇಶಿ ಪ್ರಜೆಗಳ ಸಂಖ್ಯೆ** |
|---|---|---|
| 2021 | 143 | 186 |
| 2022 | 101 | 132 |
| 2023 | 81 | 106 |
| 2024 (30.06.2024) | 26 | 37 |

ಡ್ರಗ್ಸ್ ಮಾರಾಟ ದಂಧೆಯಲ್ಲಿ ವಿದೇಶಿಯರು ಭಾಗಿಯಾಗಿರುವುದನ್ನು ಗಂಭೀರವಾಗಿ ಪರಿಗಣಿಸಿ, ವಿದೇಶಿಯರ ವಿರುದ್ಧ ಎನ್.ಡಿ.ಪಿ.ಎಸ್ ಕಾಯ್ದೆ–1985 ರಡಿಯಲ್ಲಿ ಪ್ರಕರಣಗಳನ್ನು ದಾಖಲಿಸಿ ನಿರ್ದಾಕ್ಷಿಣ್ಯ ಕ್ರಮ ಜರುಗಿಸಲಾಗಿದೆ.

| | | |
|---|---|---|
| ಇ) | ಹಲವಾರು ವಿದೇಶಿ ವಿದ್ಯಾರ್ಥಿಗಳು ತಮ್ಮ ವಿದ್ಯಾಭ್ಯಾಸಕ್ಕಾಗಿ ಇಲ್ಲಿಗೆ ಬಂದು, ನೆಲೆಸಿ ತಾವು ಓದುತ್ತಿರುವ ಕಾಲೇಜು ಮತ್ತು ಇತರೇ ಕಾಲೇಜುಗಳ ವಿದ್ಯಾರ್ಥಿಗಳನ್ನು ಗುರಿಯಾಗಿಸಿ ಅವರುಗಳನ್ನು ಡ್ರಗ್ಸ್ ಜಾಲಕ್ಕೆ ಸೆಳೆಯುತ್ತಿರುವ ಹಲವಾರು ಪ್ರಕರಣಗಳು ಕಂಡು ಬಂದಿದ್ದು ಸದರಿ ಪ್ರಕರಣಗಳಲ್ಲಿ ಸರ್ಕಾರ ಏನು ಕ್ರಮ ಕೈಗೊಂಡಿದೆ? | **ವಿದೇಶಿಯರ ಡ್ರಗ್ಸ್ ಮಾರಾಟ ದಂಧೆಯನ್ನು ತಡೆಯಲು ಸರ್ಕಾರವು ಈ ಕೆಳಕಂಡ ಕ್ರಮಗಳನ್ನು ಕೈಗೊಂಡಿರುತ್ತದೆ:-**<br>➢ ಪದೇ ಪದೇ ಡ್ರಗ್ಸ್ ಅಕ್ರಮಗಳಲ್ಲಿ ಭಾಗಿಯಾಗಿದ್ದ 5 ಜನ ವಿದೇಶಿಯರನ್ನು PIT-NDPS ಕಾಯ್ದೆ, 1988ರಡಿಯಲ್ಲಿ ಬಂಧನಾಜ್ಞೆಯನ್ನು ಜಾರಿ ಮಾಡಿ ಒಂದು ವರ್ಷಗಳ ವರೆಗೆ ಬಂಧನದಲ್ಲಿಡಲಾಗಿದೆ.<br>➢ ಅಕ್ರಮವಾಗಿ ನೆಲಸಿರುವ ವಿದೇಶಿಯರನ್ನು ಪತ್ತೆ ಮಾಡಿ ಎಫ್.ಆರ್.ಆರ್.ಓ ರವರ ಮೂಲಕ ಸದರಿಯವರ ದೇಶಗಳಿಗೆ ವಾಪಸ್ ಕಳುಹಿಸುವ ಬಗ್ಗೆ ಕ್ರಮಕೈಗೊಳ್ಳಲಾಗುತ್ತಿದೆ.<br>➢ ಡ್ರಗ್ಸ್ ಮಾರಾಟ ಮಾಡುವ ವಿದೇಶಿಯರ ಮಾಹಿತಿಯನ್ನು ಸಾರ್ವಜನಿಕರು ಟೋಲ್ ಫ್ರೀ ಸಂಖ್ಯೆ: 1908 ಗೆ ದೂರವಾಣಿಯ ಮುಖಾಂತರ ಸಂಪರ್ಕಿಸಿ ಮಾಹಿತಿ ನೀಡುವ ಯೋಜನೆಯನ್ನು ಪ್ರಾರಂಭಿಸಲಾಗಿದೆ.<br>➢ ವಿದೇಶಿಯರು ವಾಸಿಸುತ್ತಿರುವ ಪ್ರದೇಶಗಳಲ್ಲಿ ಸಾರ್ವಜನಿಕ ಸಭೆ, ಮೆರವಣಿಗೆಗಳನ್ನು ನಡೆಸುವುದರ ಮೂಲಕ ವ್ಯಾಪಕ ಪ್ರಚಾರ ಕೈಗೊಂಡು ಮಾದಕ ವಸ್ತುಗಳ ಸೇವನೆ ವಿರುದ್ಧ ಜಾಗೃತಿ ಮೂಡಿಸಲು ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ. ಠಾಣಾ ಸರಹದ್ದಿನ ಬೀಟ್ ಮತ್ತು ಸಬ್-ಬೀಟ್‌ಗಳಲ್ಲಿ ಆಗ್ಗಿಂದಾಗ್ಗೆ ವಿದೇಶಿಯರ ಜೊತೆ ಸಭೆಯನ್ನು ನಡೆಸಿ ವಿದೇಶಿಯರಲ್ಲಿ ಅರಿವು ಮೂಡಿಸುವ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುತ್ತಿದೆ.<br>➢ ವಿದೇಶಿಯರು ನೆಲೆಸಿರುವ ಪ್ರದೇಶಗಳ ಬಳಿ ಸೂಕ್ಷ್ಮ ನಿಗಾವಣೆಯನ್ನು ಮಾಡುವುದರೊಂದಿಗೆ ಅವರ ಚಟುವಟಿಕೆಗಳ ಮೇಲೆ ನಿಗಾವಣೆ ಮಾಡಲಾಗುತ್ತಿದೆ.<br>➢ ಶಾಲಾ ಕಾಲೇಜುಗಳಿಗೆ ಭೇಟಿ ನೀಡಿ ವಿದೇಶಿ ವಿದ್ಯಾರ್ಥಿಗಳಿಗೆ ಮಾದಕ ವಸ್ತುಗಳ ಸೇವನೆಯಿಂದ ಆಗುವ ದುಷ್ಪರಿಣಾಮಗಳ ಬಗ್ಗೆ ಉಪನ್ಯಾಸದ ಮೂಲಕ ವಿವರವಾಗಿ ತಿಳುವಳಿಕೆ ನೀಡಲಾಗುತ್ತಿದೆ.<br>➢ ವಿದೇಶಗಳಿಂದ ಮಾದಕ ವಸ್ತುಗಳು ಸರಬರಾಜು ಆಗುವ ಮಾರ್ಗಗಳ ಮೇಲೆ ತೀವ್ರ ನಿಗಾವಣೆ ಇಟ್ಟು, ಕಟ್ಟುನಿಟ್ಟಾದ ಕಾನೂನು ಕ್ರಮಗಳನ್ನು ಜರುಗಿಸಲಾಗುತ್ತಿದೆ. Bitcoin ಬಳಸಿ ಡಾರ್ಕ್ ನೆಟ್ Darknet, ಮುಖಾಂತರ ಡ್ರಗ್ಸ್ ಸರಬರಾಜು ಜಾಲವನ್ನು ಪತ್ತೆ ಮಾಡಿ ಕಾನೂನು ಕ್ರಮ ಕೈಗೊಳ್ಳಲಾಗಿದೆ. ಅಲ್ಲದೆ ವಿದೇಶಗಳಿಂದ ಪೋಸ್ಟಲ್/ಕೊರಿಯರ್ಸ್ ಮುಖಾಂತರ ನಗರಕ್ಕೆ ಡ್ರಗ್ಸ್ ಸರಬರಾಜು ಮಾಡುತ್ತಿದ್ದ ಜಾಲವನ್ನು ಸಹ ಭೇದಿಸಲಾಗಿದೆ.<br>➢ ವಿದೇಶಿಯರಿಂದ ಡ್ರಗ್ಸ್ ಅಕ್ರಮಗಳನ್ನು ಪರಿಣಾಮಕಾರಿಯಾಗಿ ನಿಯಂತ್ರಿಸುವ ಸಲುವಾಗಿ NCB, DRI, Customs, Railway, Education ಇಲಾಖೆಗಳ ಅಧಿಕಾರಿಗಳ ಸಮನ್ವಯ ಸಭೆಯನ್ನು ನಡೆಸಲಾಗಿದೆ. |

| | | |
|---|---|---|
| | | ➢ ಮಾದಕ ವಸ್ತುಗಳ ಮಾರಾಟ/ಸೇವನೆಯ ಪ್ರಕರಣಗಳಲ್ಲಿ ವಿದೇಶಿ ಆರೋಪಿಗಳಿಗೆ ಯಾವ ಮೂಲಗಳಿಂದ ಮಾದಕ ವಸ್ತುಗಳ ಸರಬರಾಜಾಗುತ್ತಿವೆ ಎಂಬ ಬಗ್ಗೆ ಸಂಪೂರ್ಣ ಮಾಹಿತಿ ಸಂಗ್ರಹಿಸಲು ಸೂಚಿಸಲಾಗಿದ್ದು, ಇಂತಹ ಕೃತ್ಯಗಳಲ್ಲಿ ತೊಡಗಿರುವ ವಿದೇಶಿಯರನ್ನು ದಸ್ತಿಗಿರಿ ಮಾಡಿ ಅವರುಗಳ ಪಾಸ್‌ಪೋರ್ಟ್‌ಗಳನ್ನು ಮುಟ್ಟುಗೋಲು ಹಾಕಿಕೊಂಡು ಕಾನೂನಿನ ಕ್ರಮ ಕೈಗೊಳ್ಳಲಾಗುತ್ತಿದೆ. ವಿದೇಶಿಯರು ವಾಸದ ಬಗ್ಗೆ ಮಾಹಿತಿಯನ್ನು ಸಂಬಂಧಪಟ್ಟ ಪೊಲೀಸ್ ಠಾಣೆಗಳಿಗೆ ಒದಗಿಸುವಂತೆ ಈಗಾಗಲೇ ಸುತ್ತೋಲೆಗಳನ್ನು ಹೊರಡಿಸಲಾಗಿದೆ. ವಿಶೇಷ ಕಾರ್ಯಚರಣೆಗಳನ್ನು ನಡೆಸಿ ಇಂತಹ ಕೃತ್ಯ ವೆಸಗುವಂತಹವರ ವಿರುದ್ಧ ಕಠಿಣ ಕಾನೂನಿನ ಕ್ರಮ ಕೈಗೊಳ್ಳಲಾಗುತ್ತಿದೆ.<br>➢ ವಿದೇಶಿಯರಿಂದ ಮಾದಕ ವಸ್ತುಗಳ ಅಕ್ರಮ ಸಾಗಾಣಿಕೆ ಮತ್ತು ಮಾರಾಟ ತಡೆಗಟ್ಟುವ ಸಲುವಾಗಿ, ಠಾಣಾ ಮಟ್ಟದಲ್ಲಿ ಗೌಪ್ಯ ಮಾಹಿತಿಯನ್ನು ಸಂಗ್ರಹಿಸಲಾಗುತ್ತಿದೆ.<br>➢ ಮಾದಕದ್ರವ್ಯ (ಡ್ರಗ್ಸ್) ಹಾವಳಿಯನ್ನು ತಡೆಗಟ್ಟಲು ಸೂಕ್ತ ನಿಗಾವಹಿಸಿ ಮಾದಕ ದ್ರವ್ಯಗಳ ಮಾರಾಟ ಮತ್ತೆ ಸೇವಿಸುವವರ ಬಗ್ಗೆ ಮಾಹಿತಿ ಸಂಗ್ರಹಿಸಲಾಗುತ್ತಿದೆ.<br>➢ ಬಾರ್ ಮತ್ತು ರೆಸ್ಟೋರೆಂಟ್, ಕಾಫಿ–ಡೇ, ಪಬ್, ಡಾನ್ಸ್‌ಬಾರ್ ಮುಂತಾದ ವಿದೇಶಿಯರು ಹೆಚ್ಚಾಗಿ ಸೇರುವ ಸ್ಥಳಗಳು, ಶಾಲಾ ಕಾಲೇಜು ಆವರಣ, ಬಸ್ ನಿಲ್ದಾಣ ಹಾಗು ಇನ್ನಿತರೆ ಪ್ರದೇಶಗಳಲ್ಲಿ ಮಾದಕದ್ರವ್ಯ ವಸ್ತುಗಳನ್ನು ಮಾರಾಟ ಮಾಡುತ್ತಿರುವ ಬಗ್ಗೆ ಮಾಹಿತಿಯನ್ನು ಸಂಗ್ರಹಿಸಿ ಕಾನೂನಿನ ರೀತ್ಯಾ ಕ್ರಮ ಜರುಗಿಸಲಾಗುತ್ತಿದೆ.<br>➢ ಠಾಣಾ ಸರಹದ್ದುಗಳಲ್ಲಿ ಹೊಯ್ಸಳ, ಚೀತಾ, ಅಧಿಕಾರಿ ಮತ್ತು ಸಿಬ್ಬಂದಿಗಳು ಗಸ್ತಿನಲ್ಲಿರುವ ಸಮಯದಲ್ಲಿ ಶಾಲಾ, ಕಾಲೇಜುಗಳ ಬಳಿ ಸೂಕ್ಷವಾಗಿ ಗಮನಿಸಿ ವಿದೇಶಿ ವ್ಯಕ್ತಿಗಳ ಮಾಹಿತಿ ಸಂಗ್ರಹಿಸುವಂತೆ ಸೂಚಿಸಲಾಗಿದೆ. |

ಒಇ 32 ಪಿಎನ್‌ಡಿ 2024(ಇ)

(ಡಾ: ಜಿ. ಪರಮೇಶ್ವರ)
ಗೃಹ ಸಚಿವರು